## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

## ಸಿ.ಸಿ. ಸಂಖ್ಯೆ : **2287/2024**

| | | |
|---|---|---|
| ಪಿರ್ಯಾದಿ | : | ರಾಜ್ಯ, ಪರವಾಗಿ ಮೂಡಿಗೆರೆ ಅಬಕಾರಿ ಪೊಲೀಸ್ ಠಾಣೆ, ಮೂಡಿಗೆರೆ. |

ವಿರುದ್ಧ

| | | |
|---|---|---|
| ಆರೋಪಿ | : | ಜೀವನ್, ವಯಸ್ಸು ಸುಮಾರು 30 ವರ್ಷ,<br>ಬಿನ್ ಮಂಜುನಾಥ, ವಾಸಃ ಚಿನ್ನಿಗ ಗ್ರಾಮ,<br>ಗೋಣಿಬೀಡು ಹೋಬಳಿ, ಮೂಡಿಗೆರೆ ತಾಲ್ಲೂಕು. |

### ದೋಷಾರೋಪಣೆ

ಶ್ರೀ. ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 18.03.2024 ರಂದು ಸಂಜೆ 7.30 ರ ಸಮಯದಲ್ಲಿ ಮೂಡಿಗೆರೆ ಅಬಕಾರಿ ಪೊಲೀಸ್ ಠಾಣಾ ವ್ಯಾಪ್ತಿಯ ಜನ್ನಾಪುರ ಗ್ರಾಮದಲ್ಲಿ ಸಿಬ್ಬಂಧಿಯವರು ಗಸ್ತಿನಲ್ಲಿರುವಾಗ ಜನ್ನಾಪುರ-ಸಕಲೇಶಪುರ ರಸ್ತೆಯಲ್ಲಿ ಆರೋಪಿಯಾದ ನೀವು ನಿಮಗೆ ಸೇರಿದ ವಾಹನ ನೋಂದಣಿ ಸಂಖ್ಯೆಕೆಎ-46-ಜೆ-6066 ನೇ ಹೀರೋ ಕಂಪನಿಯ ಸ್ಪ್ಲೆಂಡರ್ ಪ್ಲಸ್ ದ್ವಿಚಕ್ರ ವಾಹನದಲ್ಲಿ ಅಕ್ರಮವಾಗಿ ಲಾಭಗಳಿಸುವ ಉದ್ದೇಶದಿಂದ ಯಾವುದೇ ಪರವಾನಗಿ ಇಲ್ಲದೇ ಕಾನೂನು ಬಾಹಿರವಾಗಿ 90 ಎಂ.ಎಲ್ ನ 96 ಕ್ಯಾಪ್ಟನ್ ಮಾರ್ಟಿನ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್‌ಗಳನ್ನು ಮತ್ತು 90 ಎಂ.ಎಲ್ ನ 96 ಡಿ.ಕೆ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್‌ಗಳನ್ನು ಮಾರಾಟ ಮಾಡುವ ಉದ್ದೇಶದಿಂದ ಸಾಗಾಟ ಮಾಡುತ್ತಿದ್ದಾಗ ಪೊಲೀಸರು ನಡೆಸಿದ ದಾಳಿ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **32** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು 90 ಎಂ.ಎಲ್ ನ 96 ಕ್ಯಾಪ್ಟನ್ ಮಾರ್ಟಿನ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್‌ಗಳನ್ನು ಮತ್ತು 90 ಎಂ.ಎಲ್ ನ 96 ಡಿ.ಕೆ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್‌ಗಳನ್ನು ನಿಮ್ಮ ವಾಹನ ನೋಂದಣಿ ಸಂಖ್ಯೆಕೆಎ-46-ಜೆ-6066 ನೇ ಹೀರೋ ಕಂಪನಿಯ ಸ್ಪ್ಲೆಂಡರ್ ಪ್ಲಸ್‌ನಲ್ಲಿ ಅಕ್ರಮವಾಗಿ ಸಂಗ್ರಹಿಸಿರುತ್ತೀರಿ.

ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **38** ಎ ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ***?***

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(ಆರೋಪಿಗೆ ದಿನಾಂಕ 04.06.2025 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

ಸಹಿ/-

ಮೂಡಿಗೆರೆ
ದಿನಾಂಕಃ 04.06.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ ಮೂಡಿಗೆರೆ.